ಆ) ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಡಿ.ಬಿ.ಚಂದ್ರೇಗೌಡ(ಮಾನ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೆ, ಹದಿನೈದನೇ ಪಟ್ಟಿಯಲ್ಲಿರುವ ಲಿಖಿತ ಮೂಲಕ ಉತ್ತರಿಸುವ 91 ಪ್ರಶ್ನೆಗಳ ಪೈಕಿ 72 ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಕೊಡಗು ಜಿಲ್ಲೆಯಲ್ಲಿ ಸಣ್ಣ ಪ್ರಮಾಣದ ಕೈಗಾರಿಕೆಗೆ ಹಣ ಬಿಡುಗಡೆ.

1920(2494)

ಶ್ರೀ ಅಪ್ಪಚ್ಚು ರಂಜನ್ ಎಂ.ಪಿ.(ಸೋಮವಾರಪೇಟೆ): ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆಯಲ್ಲಿ ಸಣ್ಣ ಪ್ರಮಾಣದ ಕೈಗಾರಿಕೆ ಸ್ಥಾಪನೆಗೆ ಎಷ್ಟು ಮೊತ್ತದ ಹಣ ಬಿಡುಗಡೆ ಮಾಡಲಾಗಿದೆ; ಈ ಹಣವನ್ನು ಯಾರು ಯಾರಿಗೆ ನೀಡಲಾಗಿದೆ;

ಆ) ಕೊಡಗು ಜಿಲ್ಲೆ ಸೋಮವಾರಪೇಟೆ ತಾಲ್ಲೂಕು, ಕುಶಾಲನಗರ ಕೈಗಾರಿಕಾ ಪ್ರದೇಶದ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮವೇನು; ವಿವರ ನೀಡುವುದು?

ಶ್ರೀ ಎಸ್.ಆರ್.ಕಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು):

ಅ) ಕೊಡಗು ಜಿಲ್ಲೆಯಲ್ಲಿ ರೂ.190.13 ಲಕ್ಷ ಸಹಾಯ ಧನ ಬಿಡುಗಡೆ ಮಾಡಲಾಗಿದೆ. ತಾಲ್ಲೂಕುವಾರು ವಿವರಗಳು ಕೆಳಕಂಡಂತಿದೆ:

1) ಮಡಿಕೇರಿ	-	ರೂ. 42.94 ಲಕ್ಷ
2) ಸೋಮವಾರಪೇಟೆ	-	ರೂ.114.00 ಲಕ್ಷ
3) ವಿರಾಜಪೇಟೆ	-	ರೂ. 33.19 ಲಕ್ಷ
ಒಟ್ಟು		ರೂ.190.13 ಲಕ್ಷ

ಆ) ಕೊಡಗು ಜಿಲ್ಲೆಯಲ್ಲಿ ಸ್ವಾಧೀನಪಡಿಸಿಕೊಂಡು ಅಭಿವೃದ್ಧಿಗೊಳಿಸಿರುವ ಜಮೀನು 229.56 ಎಕರೆಗಳು, ಹಂಚಿಕೆ ಮಾಡಿರುವ ಜಮೀನು 157 ಎಕರೆ. ಲಭ್ಯವಿರುವ ಜಮೀನು 32 ಎಕರೆ. ಹೆಚ್ಚುವರಿ ಜಮೀನು ಸ್ವಾಧೀನ ಪಡಿಸಿಕೊಂಡು ಅಭಿವೃದ್ಧಿ ಮಾಡಬೇಕಾದ ಜಮೀನು 8.41 ಎಕರೆಗಳು.